# ವಿ.ಟಿ.ಯು. ಬೆಳಗಾವಿ ಬೋರ್ಡ್ ಆಫ್ ಸ್ಟಡೀಸ್ ಸದಸ್ಯರಾಗಿ ನೇಮಕ

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇದರ 2019–22ನೇ ಸಾಲಿನ ಬೇಸಿಕ್ ಸೈನ್ಸ್ ವಿಭಾಗದ ಬೋರ್ಡ್ ಆಫ್ ಸ್ಟಡೀಸ್ ಸದಸ್ಯರಾಗಿ ಸುಳ್ಯದ ಕೆ.ವಿ.ಜಿ. ಇಂಜಿನಿಯರಿಂಗ್ ಕಾಲೇಜಿನ ಗಣಿತಶಾಸ್ತ್ರ ವಿಭಾಗದ ಮುಖ್ಯಸ್ಥ ಹಾಗೂ ಡೀನ್ ಅಕಾಡೆಮಿಕ್ ಆಗಿರುವ ಡಾ। ಶ್ರೀಧರ್ ಕೆ. ಇವರು 03 ವರ್ಷಗಳ ಅವಧಿಗೆ ನೇಮಕಗೊಂಡಿರುತ್ತಾರೆ. ಇವರು ಕಳೆದ 31 ವರ್ಷಗಳಿಂದ ಸುಳ್ಯದ ಕೆ.ವಿ.ಜಿ. ಇಂಜಿನಿ0ಯರಿಂಗ್ ಕಾಲೇಜಿನಲ್ಲಿ ಸೇವೆ ಸಲ್ಲಿಸುತ್ತಿದ್ದು ಇವರು ಮುಳ್ಳೇರಿಯದ ದೇಲಂಪಾಡಿ ದಿ। ಶ್ರೀ ರಾಮಕೃಷ್ಣ ಕುಣಿಕುಳ್ಳಾಯ ಮತ್ತು ಶ್ರೀಮತಿ ಸಾವಿತ್ರಿ ಅಮ್ಮನವರ ದ್ವಿತೀಯ ಪುತ್ರರಾಗಿರುತ್ತಾರೆ.

